# ಕೊಡಗು ವಿಶ್ವವಿದ್ಯಾಲಯ
# KODAGU UNIVERSITY

**Office of the Registrar (Evaluation)**
**Jnana Kaveri Campus**
**Chikka Aluvara, Thorenoor Post,**
**Kushalnagar Taluk, Kodagu District**
E-Mail– reg-evkuk@karnataka.gov.in

**Dr. Seenappa**
***Registrar (Evaluation)***


---

No. KU/EVAL/PG Exam Notification/2023-24/127 Date: 22-03-2024

## ಪರೀಕ್ಷಾ ಪ್ರಕಟಣೆ

**ವಿಷಯ: 2023–2024ನೇ ಸಾಲಿನ ಏಪ್ರಿಲ್/ಮೇ ತಿಂಗಳಲ್ಲಿ ನಡೆಯಲಿರುವ ಎಲ್ಲಾ ಸ್ನಾತಕೋತ್ತರ ಪದವಿ ಕಾರ್ಯಕ್ರಮಗಳ ಪ್ರಥಮ ಸೆಮಿಸ್ಟರ್ ಪರೀಕ್ಷೆಗಳ ಬಗ್ಗೆ**

*****

ಕೊಡಗು ವಿಶ್ವವಿದ್ಯಾಲಯದ 2023–2024ನೇ ಸಾಲಿನ ಏಪ್ರಿಲ್/ಮೇ ತಿಂಗಳಲ್ಲಿ ನಡೆಯಲಿರುವ ಸ್ನಾತಕೋತ್ತರ ಪದವಿ ಕಾರ್ಯಕ್ರಮಗಳ ಲಿಖಿತ ಪರೀಕ್ಷೆಗಳು ದಿನಾಂಕ 05.04.2024 (Tentative) ರಿಂದ ಪ್ರಾರಂಭವಾಗಲಿರುವುದು ಎಂಬುದನ್ನು ಸಂಬಂಧಪಟ್ಟ ಸ್ನಾತಕೋತ್ತರ ಪದವಿ ಕಾರ್ಯಕ್ರಮಗಳ ಸಂಯೋಜಕರು/ಕಾಲೇಜುಗಳ ಪ್ರಾಂಶುಪಾಲರುಗಳು ಹಾಗೂ ಸದರಿ ಪರೀಕ್ಷೆಗಳಿಗೆ ಹಾಜರಾಗುವ ಎಲ್ಲಾ ಅಭ್ಯರ್ಥಿಗಳ ಗಮನಕ್ಕೆ ಈ ಮೂಲಕ ತರಲಾಗಿದೆ.

**ಸೂಚನೆಗಳು:**

1. ಕೊಡಗು ವಿಶ್ವವಿದ್ಯಾಲಯದ ಪ್ರಥಮ ಸೆಮಿಸ್ಟರ್ ಪರೀಕ್ಷೆಗೆ ಹಾಜರಾಗುವ ಎಲ್ಲಾ ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು ಎಲ್ಲಾ ವಿಷಯಗಳಿಗೆ/ಪತ್ರಿಕೆಗಳಿಗೆ ಕಡ್ಡಾಯವಾಗಿ UUCMS Portal ನಲ್ಲಿ ನೋಂದಣಿ ಮಾಡತಕ್ಕದ್ದು ಹಾಗೂ ಸಂಬಂಧಿಸಿದ ಪರೀಕ್ಷಾ ಶುಲ್ಕವನ್ನು ಕಡ್ಡಾಯವಾಗಿ Online ನಲ್ಲಿಯೇ UUCMS Portal ಮುಖಾಂತರ ಪಾವತಿಸತಕ್ಕದ್ದು. Offline ಪರೀಕ್ಷಾ ಶುಲ್ಕವನ್ನು ಯಾವುದೇ ಕಾರಣಕ್ಕೂ ಸ್ವೀಕರಿಸಲು ಸಾಧ್ಯವಿರುವುದಿಲ್ಲ.
2. ಅಪೂರ್ಣವಾದ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಹಾಗೂ ಸದರಿ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಶುಲ್ಕ ಪಾವತಿಸಿದ ರಶೀದಿ/ಚಲನ್ ಅನ್ನು ಪ್ರತ್ಯೇಕವಾಗಿ ಎಲ್ಲಾ ವಿವರಗಳನ್ನೊಳಗೊಂಡ ಮಾಹಿತಿಯೊಂದಿಗೆ ಸಲ್ಲಿಸತಕ್ಕದ್ದು.
3. ವಿಶ್ವವಿದ್ಯಾನಿಲಯದ ವಿನಿಯಮದ (ರೆಗ್ಯುಲೇಶನ್) ಪ್ರಕಾರ ಪರೀಕ್ಷೆಗೆ ಹಾಜರಾಗಲು ಅರ್ಹತೆಯನ್ನು ಹೊಂದಿದ ವಿದ್ಯಾರ್ಥಿಗಳಿಗೆ ಮಾತ್ರ ಆನ್‌ಲೈನ್‌ನ ಮುಖಾಂತರ ಪರೀಕ್ಷಾ ಅರ್ಜಿಯನ್ನು ಸಲ್ಲಿಸಲು ಅನುಮತಿಯನ್ನು ನೀಡಲಾಗಿದೆ. ಕುಲಸಚಿವರಿಂದ ಪ್ರವೇಶಾತಿ ಮತ್ತು ವರ್ಗಾವಣೆ ಪ್ರವೇಶಾತಿ ಅನುಮೋದಿಸಲ್ಪಡದ ವಿದ್ಯಾರ್ಥಿಗಳು ಮತು ನಿಯಾಮನುಸಾರ ಹಾಜರಾತಿ ಕೊರತೆ ಇರುವ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ಅನರ್ಹರಾಗಿರುತ್ತಾರೆ ಮತ್ತು ಪ್ರವೇಶಾವಕಾಶ ಅಮಾನ್ಯವಾಗಿರುವ ಅಥವಾ ವಿಶ್ವವಿದ್ಯಾಲಯದಿಂದ ಪ್ರವೇಶವು ಅನುಮೋದಿತವಾಗಿಲ್ಲದ ಅಥವಾ ನಿರ್ದಿಷ್ಟ ಪಡಿಸಲಾದ ವಿದ್ಯಾರ್ಥಿಗಳ ಸಂಖ್ಯೆಗಿಂತ ಹೆಚ್ಚಿಗೆಯಾಗಿ ವಿಭಾಗ/ಕಾಲೇಜಿಗೆ ಅಥವಾ ವ್ಯಾಸಂಗ ಕ್ರಮಕ್ಕೆ ಪ್ರವೇಶ ಪಡೆದಿರುವ ಯಾವುದೇ ವಿದ್ಯಾರ್ಥಿಯೂ ವಿಭಾಗ/ಕಾಲೇಜು ಅಥವಾ ವಿಶ್ವವಿದ್ಯಾಲಯವು ನಡೆಸುವ ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ, ಅಲ್ಲದೆ ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲದ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸುವಂತಿಲ್ಲ. ಸದರಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವುದು. ಇಲ್ಲವಾದಲ್ಲಿ ಕಾಲೇಜಿನ ಪ್ರಾಂಶುಪಾಲರೇ ಜವಾಬ್ದಾರರಾಗುವರು.
4. ವಿದ್ಯಾರ್ಥಿಗಳಿಗೆ ಇಚ್ಚೆ ಬಂದಂತೆ ಪರೀಕ್ಷಾ ಕೇಂದ್ರವನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶವಿಲ್ಲ.
5. ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಿ (ಕಾಲೇಜು ಮತ್ತು ವಿಶ್ವವಿದ್ಯಾಲಯವನ್ನು ಪ್ರತಿನಿಧಿಸಿ) ಕಾಲೇಜುಗಳಲ್ಲಿ ಹಾಜರಿಲ್ಲದ ವಿದ್ಯಾರ್ಥಿಗಳು ಕೂಡಾ ನಿಗದಿತ ಶುಲ್ಕದೊಂದಿಗೆ ಆನ್‌ಲೈನ್ ಮುಖಾಂತರ ನಿಯಮಾನುಸಾರ ಪರೀಕ್ಷಾ ಅರ್ಜಿಯನ್ನು ಸಲ್ಲಿಸುವಂತೆ ಇತರೆ ವಿದ್ಯಾರ್ಥಿಗಳಿಗೆ ಸಂಬಂಧಪಟ್ಟ ಸಂಯೋಜಕರು/ಕಾಲೇಜುಗಳ ಪ್ರಾಂಶುಪಾಲರು ನಿಗಾವಹಿಸತಕ್ಕದ್ದು.
6. ಸವಿವರವಾದ ಪರೀಕ್ಷಾ ವೇಳಾಪಟ್ಟಿಯನ್ನು ಶೀಘ್ರದಲ್ಲಿ ವೆಬ್‌ಸೈಟ್‌ನ ಮೂಲಕ ಪ್ರಕಟಿಸಲಾಗುವುದು.
7. ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳ ಪರೀಕ್ಷಾ ಹಣಕಾಸು ತಖ್ತೆ ಹಾಗೂ ಪರೀಕ್ಷಾರ್ಥಿಗಳ ಪಟ್ಟಿಯನ್ನು ಅನುಮೋದಿಸಲ್ಪಟ್ಟ ಪ್ರವೇಶಾನುಮೋದನೆ ಪಟ್ಟಿಯಲ್ಲಿ ಸೂಚಿಸಿರುವ ಮಾದರಿಯಲ್ಲಿ ದಾಖಲಿಸಬೇಕು.
8. ಒಮ್ಮೆ ಪಾವತಿಸಲಾದ ಪರೀಕ್ಷಾ ಶುಲ್ಕವನ್ನು ಯಾವುದೇ ಕಾರಣಕ್ಕೂ ಮರುಪಾವತಿ ಮಾಡಲಾಗುವುದಿಲ್ಲ ಹಾಗೂ ಅದನ್ನು ಮುಂದಿನ ಪರೀಕ್ಷೆಗಳಿಗೆ ಸರಿದೂಗಿಸಿಕೊಳ್ಳಲಾಗುವುದಿಲ್ಲ.

9. ಅಭ್ಯರ್ಥಿಗಳು ತಮ್ಮ ಪರೀಕ್ಷಾ ಶುಲ್ಕವನ್ನು ಹಾಗೂ ಅರ್ಜಿಯನ್ನು ಆನ್‌ಲೈನ್ ಮುಖಾಂತರ ಸಲ್ಲಿಸಬೇಕು.

| ಕ್ರಮ ಸಂಖ್ಯೆ | ಪ್ರೋಗ್ರಾಂ | ಶುಲ್ಕ ದರ |
|---|---|---|
| 1 | ಎಂ.ಎ.: ಕನ್ನಡ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ ಹಾಗೂ ಎಂ.ಕಾಂ. | ರೂ.1150.00 |
| 2 | ಎಂ.ಎಸ್ಸಿ. : ರಸಾಯನಶಾಸ್ತ್ರ, ಜೀವರಸಾಯನಶಾಸ್ತ್ರ, ಸೂಕ್ಷ್ಮಾಣುಜೀವ ವಿಜ್ಞಾನ, ಗಣಕ ವಿಜ್ಞಾನ ಹಾಗೂ ಎಂ.ಎಸ್.ಡಬ್ಲ್ಯೂ. | ರೂ. 1750.00 |
| **ನಿಗದಿಪಡಿಸಿದ ಪರೀಕ್ಷಾ ಶುಲ್ಕದ ಜೊತೆಗೆ ಪ್ರತೀ ಪರೀಕ್ಷೆಗೆ ರೂ.230/- ಅಂಕಪಟ್ಟಿ ಶುಲ್ಕ ಮತ್ತು ರೂ. 120/- ಅಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕಗಳನ್ನು ಪಾವತಿಸತಕ್ಕದ್ದು.** | | |

10. ವಿದೇಶಿ ಅಭ್ಯರ್ಥಿಗಳಿಗೆ ನಿಗದಿಪಡಿಸಿದ ಎಲ್ಲಾ ಶುಲ್ಕಗಳ ಮೂರು ಪಟ್ಟು ಶುಲ್ಕವನ್ನು ಪಾವತಿಸತಕ್ಕದ್ದು.
11. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು (ದಂಡಶುಲ್ಕ ರಹಿತ ಮತ್ತು ವಿವಿಧ ದರಗಳಲ್ಲಿ ದಂಡಶುಲ್ಕ ಸಹಿತ) ಪಾವತಿ ಮಾಡಲು ಈ ಕೆಳಕಂಡ ದಿನಾಂಕಗಳನ್ನು ನಿಗದಿಪಡಿಸಲಾಗಿದೆ,

    **ಪರೀಕ್ಷಾ ಶುಲ್ಕವನ್ನು ಕಟ್ಟಲು ನಿಗದಿಪಡಿಸಲಾದ ಅಂತಿಮ ದಿನಾಂಕ:**

    ದಂಡಶುಲ್ಕ ರಹಿತ – 23.03.2024 ರಿಂದ 27.03.2024 ವರೆಗೆ
    ದಂಡಶುಲ್ಕ ದಿನವೊಂದಕ್ಕೆ ರೂ. 300/-ರಂತೆ – 28.03.2024 ರಿಂದ 29.03.2024 ವರೆಗೆ
    ವಿಶೇಷ ದಂಡಶುಲ್ಕ ರೂ. 500/- ರಂತೆ – 30.03.2024 ರಿಂದ 01.04.2024 ವರೆಗೆ
12. ಈ ಕೆಳಗೆ ನಮೂದಿಸಿರುವ ತಖ್ತೆಗಳನ್ನು ಮತ್ತು ದಾಖಲೆ ಪತ್ರಗಳನ್ನು ತಪ್ಪದೇ ಈ ಕಛೇರಿಗೆ ದಿನಾಂಕ 08.04.2024ರ ಒಳಗಾಗಿ ಕಳುಹಿಸಿಕೊಡುವುದು.

    ಅ) ಹಣಕಾಸು ತಃಖ್ತೆ

    ಆ) ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ನೀಡಲಾದ ಶುಲ್ಕ ವಿನಾಯಿತಿ ತಃಖ್ತೆ. ಅಂತಹ ಯಾವುದೇ ಬೇಡಿಕೆಗಳು ಇಲ್ಲದಿದ್ದಲ್ಲಿ ಶೂನ್ಯ ವರದಿಯನ್ನು ತಪ್ಪದೇ ಕಳಿಸಿಕೊಡಬೇಕು.

    ಇ) ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳ ಪಟ್ಟಿ
13. ಪ್ರಾಯೋಗಿಕ ಪರೀಕ್ಷೆಗಳನ್ನು ಲಿಖಿತ ಪರೀಕ್ಷೆಗಳ ನಂತರ ನಡೆಸತಕ್ಕದ್ದು. ಈ ಬಗ್ಗೆ ಪ್ರತ್ಯೇಕ ಪ್ರಕಟಣೆ ಹೊರಡಿಸಲಾಗುವುದು.

ಕುಲಸಚಿವರು (ಪರೀಕ್ಷಾಂಗ)
**ಕುಲಸಚಿವರು (ಮೌಲ್ಯಮಾಪನ)**
**ಕೊಡಗು ವಿಶ್ವವಿದ್ಯಾಲಯ**
**ಚಿಕ್ಕ ಅಳುವಾರ-571232**
**ಕುಶಾಲನಗರ ತಾ, ಕೊಡಗು, ಕರ್ನಾಟಕ**

**ಲಗತ್ತು:** ಅ) ಹಣಕಾಸು ತಃಖ್ತೆ
ಆ) ಪರೀಕ್ಷಾ ಶುಲ್ಕ ವಿನಾಯಿತಿ ತಃಖ್ತೆ (ಪರಿಶಿಷ್ಟ ಜಾತಿ/ಪಂಗಡ)

ರಿಗೆ,

ವಿಶ್ವವಿದ್ಯಾಲಯದ ಕಾರ್ಯವ್ಯಾಪ್ತಿಯಲ್ಲಿ ಬರುವ ಎಲ್ಲಾ ಸ್ನಾತಕೋತ್ತರ ಪದವಿ ಕಾರ್ಯಕ್ರಮಗಳನ್ನು ಬೋಧಿಸುತ್ತಿರುವ ಎಲ್ಲಾ ಪ್ರೋಗ್ರಾಂನ ಸಂಯೋಜಕರು/ಕಾಲೇಜುಗಳ ಪ್ರಾಂಶುಪಾಲರುಗಳಿಗೆ, ಸೂಚನಾಫಲಕದಲ್ಲಿ ಪ್ರಕಟಿಸುವಂತೆ ತಿಳಿಸಲಾಗಿದೆ.

ಪ್ರತಿ:

1. ಕುಲಸಚಿವರು/ಹಣಕಾಸು ಅಧಿಕಾರಿಗಳು, ಕೊಡಗು ವಿಶ್ವವಿದ್ಯಾಲಯ, ಕೊಡಗು
2. ಕುಲಸಚಿವರು (ಪರೀಕ್ಷಾಂಗ), ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ
3. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ಕೊಡಗು ವಿಶ್ವವಿದ್ಯಾಲಯ, ಕೊಡಗು
4. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ವಿಶ್ವವಿದ್ಯಾನಿಲಯ ಕಾಲೇಜು ಆವರಣ, ಮಂಗಳೂರು.
5. ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ, ಮಡಿಕೇರಿ, ಕೊಡಗು ಜಿಲ್ಲೆ